**ಪ್ರಧಾನ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ**

**ಸಿ.ಸಿ. ನಂ. 603/2020**

| | | | |
|---|---|---|---|
| **ಹೆಸರು** | **:** | **ಬಕ್ಕಪ್ರಭು** | **ದೋ.ಸಾ. 2** |
| **ತಂದೆಯ ಹೆಸರು** | **:** | **ವೈಜುನಾಥ** | **ಪ್ರಾ.ಸಾ. 2** |
| **ವಯಸ್ಸು** | **:** | **40 ವರ್ಷ** | **ದಿನಾಂಕಃ 12-02-2024** |
| **ಉದ್ಯೋಗ** | **:** | **ಒಕ್ಕಲುತನ** | |
| **ವಾಸಸ್ಥಳ** | **:** | **ಸೋಮನಿಂಗದಳ್ಳಿ** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

ಈ ಪ್ರಕರಣದ ಸಾಕ್ಷಿದಾರರಾದ ಚಾಸಾ-1 ಮತ್ತು 3 ಗೊತ್ತು. ಸದರಿಯವರು ನಮ್ಮ ಊರಿನವರು.

ಈಗ ನನಗೆ ತೋರಿಸಲಾದ ದಾಖಲೆಯಲ್ಲಿರುವ ಸಹಿ ನನ್ನದೇ. ಸಾಕ್ಷಿ ನೋಡಿ ಗುರುತಿಸಿದ ದಾಖಲೆಯನ್ನು ಈಗ ನಿಪಿ-3 ಎಂದೂ, ಸಾಕ್ಷಿಯ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು.

ಈಗ್ಗೆ 2 ವರ್ಷಗಳಿಂದ ಹಿಂದೆ ನಮ್ಮ ಊರಿನ ದರ್ಗಾ ಬಳಿ ಬಂದಿದ್ದ ಪೋಲಿಸರು ಒಂದು ಕೇಸಿನಲ್ಲಿ ನಿಮ್ಮ ಸಾಕ್ಷಿ ಇದೆ ಎಂದು ಹೇಳಿ ನಿಪಿ-3 ರ ದಾಖಲೆಯ ಮೇಲೆ ನನ್ನ ಸಹಿ ಪಡೆದರು.

ನಿಪಿ-3 ರ ದಾಖಲೆಯಲ್ಲಿ ಏನು ಬರೆದಿದೆ ಎನ್ನುವುದು ನನಗೆ ಗೊತ್ತಿಲ್ಲ. ಪೋಲೀಸರು ಅದನ್ನು ನನಗೆ ಓದಿ ಹೇಳಿಲ್ಲ. ಪೋಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಜರುಗಿಸಿಲ್ಲ.

(ಈ ಹಂತದಲ್ಲಿ ತನಿಖಾಧಿಕಾರಿಯವರು ಜರುಗಿಸಿದ ಪಂಚನಾಮೆಗೆ ಈ ಸಾಕ್ಷಿ ಸಂಪೂರ್ಣ ಪ್ರತಿಕೂಲ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೊಡುವಂತೆ ಸ.ಸ.ಅ.ರವರು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

ದಿನಾಂಕ 20-01-2020 ರಂದು ಸೋಮನಿಂಗದಳ್ಳಿ ಗ್ರಾಮದಲ್ಲಿರುವ ಆರೋಪಿತರ ಮನೆಯ ಹತ್ತಿರದ ಖಾಲಿ ಜಾಗದಲ್ಲಿ ಈ ಪ್ರಕರಣದ ಪಿರ್ಯಾದಿ ಚಾಸಾ-1 ರವರು ತೋರಿಸಿದಂತೆ ನನ್ನ ಮತ್ತು ಚಾಸಾ-3 ರವರ ಸಮಕ್ಷಮ ಪೋಲೀಸರು ಕೌಟುಂಬಿಕ ದೌರ್ಜನ್ಯ ಪ್ರಕರಣವೊಂದಕ್ಕೆ

ಸಂಬಂಧಪಟ್ಟಂತೆ ನಿಪಿ-3 ರ ಪಂಚನಾಮೆಯನ್ನು ಬೆಳಿಗ್ಗೆ 9-00 ರಿಂದ 10-00 ವರೆಗೆ ಬರೆದರು ಎನ್ನುವುದು ಸರಿಯಲ್ಲ.

ನಿಪಿ-3 ರ ದಾಖಲೆಯನ್ನು ಪೋಲೀಸರು ನನಗೆ ಓದಿ ಹೇಳಿದ್ದರು ಎನ್ನುವುದು ಸರಿಯಲ್ಲ.

ನನ್ನ ಸಮಕ್ಷಮವೇ ನಿಪಿ-3 ರ ಪಂಚನಾಮೆಯನ್ನು ಪೋಲೀಸರು ಜರುಗಿಸಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡುವ ಸಲುವಾಗಿ 1 ನೇ ಆರೋಪಿ ಮಾತು ಕೇಳಿಕೊಂಡು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುঃ ಆರೋಪಿತರ ಪರವಾಗಿ ಶ್ರೀ ಸಿ.ಎಸ್. ವಕೀಲರಿಂದಃ ಇಲ್ಲಾ**

**ಮರುವಿಚಾರಣೆಃ ಇಲ್ಲಾ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಪ್ರ.ದ.ನ್ಯಾ.ದಂ. ಚಿಂಚೋಳಿ**